## 62. ರಾಜ್ಯದ ಕಾರ್ಮಿಕ ರಕ್ಷಣೆಗೆ ಸಿದ್ದು ಆಗ್ರಹ

ಬೇರೆ ರಾಜ್ಯಗಳಲ್ಲಿ ಸಿಲುಕಿಕೊಂಡಿರುವ ರಾಜ್ಯದ ಕಾರ್ಮಿಕರು ಸ್ವಂತ ಊರುಗಳನ್ನು ತಲುಪಲು ಸರ್ಕಾರ ಎಲ್ಲ ಕಾರ್ಮಿಕರಿಗೆ ಕೂಡಲೇ ವ್ಯವಸ್ಥೆ ಮಾಡಬೇಕೆಂದು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

ಮುಖ್ಯಮಂತ್ರಿಯವರಿಗೆ ಪತ್ರ ಬರೆದಿರುವ ಅವರು, ಬೆಂಗಳೂರು ಸೇರಿ ರಾಜ್ಯದ ವಿವಿಧ ಕಡೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರು ಲಾಕ್‌ಡೌನ್ ಜಾರಿಯಾದ ಬಳಿಕ ತಮ್ಮ ಊರುಗಳಿಗೆ ಹೋಗಲಾಗದೆ ಸಂಕಷ್ಟಕ್ಕೆ ಒಳಗಾಗಿದ್ದು, ಸರ್ಕಾರ ಅವರನ್ನು ಮಾನವೀಯವಾಗಿ ನಡೆಸಿಕೊಳ್ಳುತ್ತಿಲ್ಲ, ಊರುಗಳಿಗೆ ಹೋಗಲು ಆಗದೆ, ಆಹಾರವಿಲ್ಲದೇ ಅವರು ಹೆಣಗಾಡುತ್ತಿದ್ದಾರೆ.

ಕಾರ್ಮಿಕರ ಪ್ರಯಾಣ ವೆಚ್ಚದಲ್ಲಿ ಶೇ.85ರಷ್ಟನ್ನು ಭರಿಸುವುದಾಗಿ ಕೇಂದ್ರ ಸರ್ಕಾರ ಹೇಳಿದೆ. ಉಳಿದ ವೆಚ್ಚವನ್ನು ರಾಜ್ಯ ಸರ್ಕಾರ ಭರಿಸುವ ಮೂಲಕ ಕಾರ್ಮಿಕರ ಪ್ರಯಾಣಕ್ಕೆ ಅನುಕೂಲ ಮಾಡಿಕೊಡಬೇಕು. ಬೆಂಗಳೂರಿನಿಂದ ಹೋಗುವ ಕಾರ್ಮಿಕರಿಗೆ ಅಕ್ಕಪಕ್ಕದ ಜಿಲ್ಲೆಗಳ ರೈಲ್ವೆ ನಿಲ್ದಾಣಕ್ಕೆ ಯಾವುದೇ ಸೌಕರ್ಯ ಇಲ್ಲದ ಕಾರಣ ಅವರಿಗೆ ಬಸ್ ವ್ಯವಸ್ಥೆ ಮಾಡಬೇಕು. ಕಾರ್ಮಿಕರು ಸುರಕ್ಷಿತವಾಗಿ ಊರು ತಲುಪುವವರೆಗೆ ಊಟದ ಸೌಲಭ್ಯವನ್ನು ಒದಗಿಸಬೇಕೆಂದು ಸರ್ಕಾರವನ್ನು ಆಗ್ರಹಿಸಿದ್ದಾರೆ.

ಆಧಾರ:ಉದಯವಾಣಿ, ದಿನಾಂಕ:11.05.2020